3


ಕರ್ನಾಟಕ ಸರ್ಕಾರ

ಕರ್ನಾಟಕ ರಾಜ್ಯ ಸಮಗ್ರ ಮಕ್ಕಳ ರಕ್ಷಣಾ ಯೋಜನೆ

C/o, ನಿರ್ದೇಶನಾಲಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಒಂದನೇ ಮಹಡಿ, ಬಹು ಮಹಡಿಗಳ ಕಟ್ಟಡ, ಡಾ॥ ಬಿ.ಆರ್. ಅಂಬೇಡ್ಕರ್ ವೀದಿ, ಬೆಂಗಳೂರು-560001, ಕರ್ನಾಟಕ

**E-mail ID: icps.kar@gmail.com** **Ph.No.080-22879381/82**


ಸಂಖ್ಯೆ: ಕೆಎಸ್‌ಐಸಿಪಿಎಸ್/ಮರ/ಸಹಾಯವಾಣಿ/29/2020-21 ದಿನಾಂಕ:28.07.2020

ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು,
ಜಿಲ್ಲಾ ಮಕ್ಕಳ ರಕ್ಷಣಾ ಘಟಕ,
ಎಲ್ಲಾ ಜಿಲ್ಲೆಗಳು.

ಮಾನ್ಯರೇ,

ವಿಷಯ: ಕೋವಿಡ್-19 ಹಿನ್ನೆಲೆಯಲ್ಲಿ ಮಕ್ಕಳ ಸಮಸ್ಯೆಗಳಿಗಾಗಿ ಆಯೋಗ ಉಚಿತ ಸಹಾಯವಾಣಿ ಬಗ್ಗೆ ಪ್ರಚಾರ ನೀಡುವ ಕುರಿತು.

ಉಲ್ಲೇಖ: ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ, ಬೆಂಗಳೂರು ಇವರ ಪತ್ರ ಸಂಖ್ಯೆ: ಕರಾಮಹರಆ/ ಸಹಾಯವಾಣಿ/2020-21/81, ದಿನಾಂಕ:11-06-2020.

* * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗವು ಕೋವಿಡ್-19 ಅವಧಿಯಲ್ಲಿ ಮಕ್ಕಳು ಎದುರಿಸುತ್ತಿರುವ ಸಮಸ್ಯೆಗಳಿಗೆ ಸೂಕ್ತ ಮಾರ್ಗದರ್ಶನ, ಆಪ್ತಸಮಾಲೋಚನೆ ಹಾಗೂ ತ್ವರಿತ ಗತಿಯಲ್ಲಿ ಪರಿಹಾರ ಒದಗಿಸಲು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗವು ಕೋವಿಡ್-19 ಸಹಾಯವಾಣಿಯನ್ನು ಆರಂಭಿಸಿರುತ್ತದೆ. **"ಕೋವಿಡ್-19 ಅವಧಿಯಲ್ಲಿ ಮಕ್ಕಳ ಸಮಸ್ಯೆಗಳಿಗಾಗಿ ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಉಚಿತ ಸಹಾಯವಾಣಿ ಸಂಖ್ಯೆ 080-47181177 ಯನ್ನು ಸಂಪರ್ಕಿಸಬಹುದು"** ಸದರಿ ಸಹಾಯವಾಣಿಯ ಬಗ್ಗೆ ಸಾರ್ವಜನಿಕರಲ್ಲಿ ಮಾಹಿತಿ ಇಲ್ಲದಿರುವ ಪ್ರಯುಕ್ತ ಹೆಚ್ಚಿನ ಜನರಿಗೆ ತಲುಪುವ ಅವಶ್ಯಕತೆ ಇರುವುದು ಆಯೋಗಕ್ಕೆ ಕಂಡು ಬಂದಿರುತ್ತದೆ.

ಪ್ರಯುಕ್ತ ಈ ಕೆಳಕಂಡ ಸಂದೇಶವನ್ನು Child Care Institution ಜಿಲ್ಲೆಯ ಎಲ್ಲಾ ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಕಛೇರಿ, ಜಿಲ್ಲಾಧಿಕಾರಿಗಳ ಕಛೇರಿ, ಪಂಚಾಯತ್ ಕಛೇರಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಛೇರಿಗಳ ನಾಮ ಫಲಕದಲ್ಲಿ ಮತ್ತು ಹೆಚ್ಚು ಸಾರ್ವಜನಿಕರು ಓಡಾಡುವ ಸ್ಥಳಗಳಲ್ಲಿ ಎ-4 ಪ್ರತಿಗಳಲ್ಲಿ ಜೆರಾಕ್ಸ್ ಮಾಡಿಸಿ ಕಡ್ಡಾಯವಾಗಿ ಅಳವಡಿಸುವಂತೆ ಮತ್ತು ಸಹಾಯವಾಣಿಯ ಬಗ್ಗೆ ಹೆಚ್ಚಿನ ರೀತಿಯಲ್ಲಿ ಪ್ರಚಾರ ನೀಡಲು ಕೋರಲಾಗಿದೆ.

ತಮ್ಮ ವಿಶ್ವಾಸಿ,

ನಿರ್ದೇಶಕರು,
ಸಮಗ್ರ ಮಕ್ಕಳ ರಕ್ಷಣಾ ಯೋಜನೆ,
ಬೆಂಗಳೂರು.